# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1399** |
| ಸದಸ್ಯರ ಹೆಸರು | : | ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 16-03-2026 |
| ಉತ್ತರಿಸುವ ಸಚಿವರು | | ಮಾನ್ಯ ಇಂಧನ ಸಚಿವರು |

****

| | ಪ್ರಶ್ನೆ | ಉತ್ತರ |
|---|---|---|
| ಅ) | ವಿದ್ಯುತ್ ಸಂಪರ್ಕದ ಕೊರತೆಯಿಂದ ಕಟ್ಟಡ ನಿರ್ಮಾಣವಾಗದೆ ಕಟ್ಟಡ ಕಾರ್ಮಿಕರಿಗೆ ಉದ್ಯೋಗ ದೊರೆಯದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿದ್ಯುತ್ ಸಂಪರ್ಕದ ವ್ಯವಸ್ಥೆಯನ್ನು ಸರಿಪಡಿಸಲು ಯಾವ ಯಾವ ಕ್ರಮಗಳನ್ನು ಜರುಗಿಸಲಾಗಿದೆ: | ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ವಿದ್ಯುಚ್ಛಕ್ತಿ ಸರಬರಾಜು ಷರತ್ತು 4.00 ರ ನಿಯಮಾವಳಿಗಳನ್ವಯ ಅಗತ್ಯ ದಾಖಲೆಗಳನ್ನು ಹಾಗೂ ಮಾನ್ಯ ಘನ ಸರ್ವೋಚ್ಚ ನ್ಯಾಯಾಲಯದ ದಿನಾಂಕ 17.12.2024 ರ ಆದೇಶದನ್ವಯ ಸ್ವಾಧೀನಾನುಭವ ಪತ್ರ ಪಡೆದು ವಿದ್ಯುತ್ ಕಲ್ಪಿಸಲಾಗುತ್ತದೆ.<br><br>ಪ್ರಸ್ತುತ ನಗರಾಭಿವೃದ್ಧಿ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳು ಹೊರಡಿಸಿರುವ ಆದೇಶ ಸಂಖ್ಯೆ: ನಅಇ 334 ಎಂಎನ್‌ಯು 2025, ಬೆಂಗಳೂರು ದಿನಾಂಕ: 13.10.2025, ನಅಇ 283 ಎಂಎನ್ಇ 2025(ಇ), ಬೆಂಗಳೂರು, ದಿನಾಂಕ: 24.10.2025, ನಅಇ 244 ಜಿ.ಇ.ಎಲ್ 2025, ಬೆಂಗಳೂರು, ದಿನಾಂಕ 24.10.2025 ಮತ್ತು RDPR 856 GPA 2025, ಬೆಂಗಳೂರು, ದಿನಾಂಕ 31.12.2025ಗಳಲ್ಲಿ ರಾಜ್ಯದ ವಿವಿಧ ಪ್ರದೇಶಗಳಲ್ಲಿ 1200 ಚ.ಅಡಿ ವಿಸ್ತೀರ್ಣದವರೆಗಿನ ನಿವೇಶನಗಳಲ್ಲಿ, ನಿರ್ಮಿಸಿರುವ ನೆಲ + 2 ಅಂತಸ್ತು ಅಥವಾ Stilt + 3 ಅಂತಸ್ತಿನವರೆಗಿನ ವಾಸದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ (Occupancy certificate) ಪಡೆಯುವುದರಿಂದ ವಿನಾಯಿತಿ ನೀಡಲಾಗಿರುತ್ತದೆ.<br><br>ಸದರಿ ಆದೇಶಗಳಲ್ಲಿ ಸೂಚಿಸಿರುವ ಷರತ್ತುಗಳನ್ನು ಪೂರೈಸುವ ವಸತಿ/ವಾಸದ ಕಟ್ಟಡಗಳಿಗೆ, ಅರ್ಜಿದಾರರಿಂದ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯದೆ ಹಾಗೂ ಇತರೆ ಎಲ್ಲಾ ವರ್ಗದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆದು ನಿಯಮಾನುಸಾರ ಯಾವುದೇ ವಿಳಂಬವಿಲ್ಲದೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗುತ್ತಿದೆ.<br><br>ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಗಳು ಮತ್ತು ಗ್ರಾಮೀಣಾ ಸ್ಥಳೀಯ ಸಂಸ್ಥೆಗಳು 1200 ಚದರ ಅಡಿ ಮೇಲ್ಪಟ್ಟ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯುವುದರಿಂದ ವಿನಾಯಿತಿ ನೀಡಿ ಆದೇಶ ಹೊರಡಿಸಿದ್ದಲ್ಲಿ, ಸದರಿ ಆದೇಶಗಳನ್ವಯ ವಿದ್ಯುತ್ ಸಂಪರ್ಕ ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ) | 1200 ಅಡಿ ಹೆಚ್ಚು ಅಳತೆಯ ನಿವೇಶನಗಳಿಗೆ ವಿದ್ಯುತ್ ಸಂಪರ್ಕವನ್ನು ನೀಡಲು ಯಾವ ಕ್ರಮ ಜರುಗಿಸಲಾಗಿದೆ ; | |
| ಇ) | ವಿದ್ಯುತ್ ಸಂಪರ್ಕದ ವ್ಯವಸ್ಥೆಯನ್ನು ಸರಿಪಡಿಸದೇ ಇದ್ದಲ್ಲಿ ಮಧ್ಯಮ ವರ್ಗದವರು ಮತ್ತು ಬಡವರು ಮನೆಗಳನ್ನು ನಿರ್ಮಿಸಿಕೊಳ್ಳಲು ತೊಂದರೆಯಾಗುವುದಿಲ್ಲವೇ; ಇದರಿಂದ ಉಂಟಾಗುವ ತೊಂದರೆಗಳನ್ನು ಬಗೆಹರಿಸುವುದು ಯಾವಾಗ: | |
| ಈ) | ವಿದ್ಯುತ್ ಸಂಪರ್ಕವನ್ನು ನೀಡದೇ ಇದ್ದಲ್ಲಿ ಕಟ್ಟಡ ಕಾರ್ಮಿಕರಿಗೆ, ಉಂಟಾಗುವ ತೊಂದರೆಗಳನ್ನು ಮತ್ತು ಅವರಿಗೆ ಉದ್ಯೋಗ ವ್ಯವಸ್ಥೆಯನ್ನು ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | |

ಸಂಖ್ಯೆ: ಎನರ್ಜಿ 68 ಇಬಿಎಸ್ 2026

(ಕೆ.ಜೆ.ಜಾರ್ಜ್)
ಇಂಧನ ಸಚಿವರು